# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 792 |
| ಸದಸ್ಯರ ಹೆಸರು | : | ಶ್ರೀ ಟಿ.ಎನ್. ಜವರಾಯಿ ಗೌಡ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.03.2025 |
| ಉತ್ತರಿಸಬೇಕಾದ ಸಚಿವರು | : | ಉಪ ಮುಖ್ಯಮಂತ್ರಿಯವರು |

*******

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪಿ.ಆರ್.ಆರ್ ಯೋಜನೆಗೆ ಭೂಮಿ ನೀಡಿದ ರೈತರಿಗೆ ಪರಿಹಾರದ ದರ ನಿಗಧಿಪಡಿಸಲಾಗಿದೆಯೇ; | ಸರ್ಕಾರದ ಆದೇಶ ಸಂಖ್ಯೆ:ನಅಇ/168/ಬೆಂಭೂಸ್ವಾ/ 2024, ದಿನಾಂಕ:21.09.2024ರಲ್ಲಿ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿ.ಆರ್.ಆರ್) ಯೋಜನೆಗೆ ಭೂಮಿ ನೀಡಿದ ರೈತರಿಗೆ ಭೂಪರಿಹಾರ ಮೊತ್ತವನ್ನು ನಿಗದಿಪಡಿಸಲು ಸೂಚಿಸಲಾಗಿದೆ. |
| ಆ | ಭೂಸ್ವಾಧೀನ ಕಾಯ್ದೆ 1894 ಮತ್ತು 2013 ರ ಕಾಯ್ದೆಯ ಸಾಮ್ಯತೆಗೆ ಅನುಗುಣವಾಗಿ ಪರಿಹಾರ ನಿಗಧಿಪಡಿಸಲಾಗುವುದೇ; 2013ರ ಕಾಯ್ದೆ ಪ್ರಕಾರವೇ ರೈತರಿಗೆ ಪರಿಹಾರ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು; ಏಕೆ ಈ ರೀತಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ. (ಸಂಪೂರ್ಣ ಮಾಹಿತಿಯೊಂದಿಗೆ ವಿವರಣೆ ನೀಡುವುದು) | • ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಭೂಮಾಲೀಕರೊಂದಿಗೆ ಸಂಧಾನ ಸೂತ್ರ(ಸಂಧಾನಿತ ಮೊತ್ತ)ದ ಮೂಲಕ ಭೂಸ್ವಾಧೀನ ಕಾಯ್ದೆ, 1894 ರಡಿ ನಿಗಧಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಪರಿಹಾರ ಮೊತ್ತವನ್ನು ನಿಗದಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್. ನೀಡಲು ನಿಗದಿಪಡಿಸಲು ಕ್ರಮವಹಿಸಲಾಗುತ್ತಿದೆ.<br><br>• ಮಾನ್ಯ ಸರ್ವೋಚ್ಛ ನ್ಯಾಯಾಲಯವು MA.No.1614-1616/2019 IN MA No.1346-1348/2019 IN CA No.7661-7663/2018 ರಲ್ಲಿ ನೀಡಿರುವ ದಿನಾಂಕ:20.01.2022ರ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ, 1976ರಡಿ ಪ್ರಾಧಿಕಾರದ ಭೂಸ್ವಾಧೀನಕ್ಕೆ 2013ರ ಭೂಸ್ವಾಧೀನ ಕಾಯ್ದೆಯು ಅನ್ವಯವಾಗುವುದಿಲ್ಲ. |
| ಇ | ಪೆರಿಫೆರಲ್ ವರ್ತುಲ ರಸ್ತೆ ನಿರ್ಮಾಣ ಸಂಬಂಧ ಬಿಡಿಎ ಸುಮಾರು 4 ಸಾವಿರ ರೈತರಿಗೆ ನೋಟೀಸ್ ನೀಡಿದ್ದು, ಭೂಮಿ ಬಿಟ್ಟುಕೊಟ್ಟು ಪರಿಹಾರ ಪಡೆಯಲು ಒಪ್ಪಿಗೆ ಸೂಚಿಸುವಂತೆ ರೈತರಲ್ಲಿ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪೆರಿಫೆರಲ್ ರಿಂಗ್ ರಸ್ತೆ ಭಾಗ-1) ಯೋಜನೆಯಡಿ ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಪರಿಹಾರಕ್ಕೆ ಸಂಬಂಧಿಸಿದಂತೆ ಭೂಮಾಲೀಕರುಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನೋಟೀಸ್ ಜಾರಿ ಮಾಡಲಾಗಿದೆ. |
| ಈ | ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | • ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಜಮೀನಿನ ರೈತರೊಂದಿಗೆ ಸಮಾಲೋಚಿಸಿ ಸಂಧಾನ ಸೂತ್ರ (ಸಂಧಾನಿತ ಮೊತ್ತ) ದ ಮೂಲಕ ಸಂಧಾನಿತ ದರವನ್ನು ನಿಗದಿಪಡಿಸಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಹಂತದಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಅದರಂತೆ ಸಮಿತಿಯು ಕಾರ್ಯೋನ್ಮುಖವಾಗಿದೆ. |

| | | |
|---|---|---|
| | | • ಮುಂದುವರೆದು, ಈ ಸಮಿತಿಯು ಸಲ್ಲಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ಅನುಮೋದನೆ ನೀಡಲು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಅಧಿಕಾರಯುತ ಸಮಿತಿಯನ್ನು ರಚಿಸಲಾಗಿರುತ್ತದೆ. |
| ಉ | ಸದರಿ ನೋಟೀಸ್‌ಗೆ ರೈತರು ನೀಡಿರುವ ಉತ್ತರವೇನು; ಪಿ.ಆರ್.ಆರ್ ರಸ್ತೆ ಹಾದು ಹೋಗುವ ಮಾರ್ಗದಲ್ಲಿ ಪ್ರತಿ ಎಕರೆಗೆ ಹೊಸ ದರ ನೀಡಬೇಕು, ಇಲ್ಲವೇ ಯೋಜನೆ ಕೈಬಿಡಬೇಕು ಎಂದು ರೈತರು ನೋಟೀಸ್‌ಗೆ ಉತ್ತರ ನೀಡಿರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಮುಖವಾಗಿ 2013 ರ ಭೂಸ್ವಾಧೀನ ಕಾಯ್ದೆಯಂತೆ ಪರಿಹಾರ ನೀಡಲು, ಭೂಸ್ವಾಧೀನದಿಂದ ಕೈಬಿಡಲು, ಯೋಜನೆ ಕೈಬಿಡಲು, ಹಾಗೂ ಭೂಸ್ವಾಧೀನದ ಭಾಗಶಃ ವಿಸ್ತೀರ್ಣವನ್ನು ಭೂಮಾಲೀಕರಿಗೆ ಬಿಟ್ಟುಕೊಡುವಂತೆ ಭೂಮಾಲೀಕರುಗಳಿಂದ ಕೋರಿಕೆಗಳು ಸಲ್ಲಿಕೆಯಾಗಿರುತ್ತದೆ. |
| ಊ | ಹಾಗಿದ್ದಲ್ಲಿ, ಸರ್ಕಾರ ರೈತರ ಪರವಾಗಿ ತೆಗೆದುಕೊಂಡಿರುವ ನಿರ್ಣಯಗಳೇನು; (ವಿವರ ನೀಡುವುದು) | ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರಿಗೆ ಆಯಾ ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಸಂಧಾನ ಸೂತ್ರ (ಸಂಧಾನಿತ ಮೊತ್ತ)ದ ಮೂಲಕ ಭೂಸ್ವಾಧೀನ ಕಾಯ್ದೆ, 1894 ರಡಿ ನಿಗಧಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಪರಿಹಾರ ಮೊತ್ತವನ್ನು ನಿಗದಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್. ನೀಡಲು ಉದ್ದೇಶಿಸಲಾಗಿರುತ್ತದೆ. |
| ಋ | ಇಲ್ಲಿ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನಕ್ಕೆ 15 ವರ್ಷಗಳ ಹಿಂದೆಯೇ ಅಧಿಸೂಚನೆ ಹೊರಡಿಸಿದ್ದು ಹೀಗಾಗಿ ರೈತರು ಈ ಅಧಿಸೂಚಿತ ಭೂಮಿಯಲ್ಲಿ ಬೆಳೆಯನ್ನು ಬೆಳೆಯಲಾಗದೆ, ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗದೇ ಸಂಕಷ್ಟಕ್ಕೆ ಸಿಲುಕಿರುವುದರಿಂದ ಸರ್ಕಾರ ಭೂಸ್ವಾಧೀನ ಕಾಯ್ದೆ 1894 ರ ಬದಲು 2013ರ ಕಾಯ್ದೆಯಂತೆ ರೈತರಿಗೆ ಪರಿಹಾರ ನೀಡಲು ಸರ್ಕಾರ ಮುಂದಾಗುವುದೇ? (ಸ್ಪಷ್ಟ ವಿವರ ನೀಡುವುದು) | • ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪೆರಿಫೆರಲ್ ರಿಂಗ್ ರಸ್ತೆ) ಯೋಜನೆಗಾಗಿ ಭೂಸ್ವಾಧೀನ ಪ್ರಕ್ರಿಯೆಯು 2005ನೇ ಸಾಲಿನಿಂದ ಪ್ರಾರಂಭವಾಗಿದೆ.<br>• ಮಾನ್ಯ ಸರ್ವೋಚ್ಚ ನ್ಯಾಯಾಲಯವು MA.No.1614-1616/2019 IN MA No.1346-1348/2019 IN CA No.7661-7663/2018ರಲ್ಲಿ ನೀಡಿರುವ ದಿನಾಂಕ:20.01.2022ರ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ, 1974ರಡಿ ಪ್ರಾಧಿಕಾರದ ಭೂಸ್ವಾಧೀನಕ್ಕೆ 2013ರ ಭೂಸ್ವಾಧೀನ ಕಾಯ್ದೆಯು ಅನ್ವಯವಾಗುವುದಿಲ್ಲ.<br>• ಯೋಜನೆಗೆ ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರುಗಳಿಗೆ ಆಯಾ ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಸಂಧಾನ ಸೂತ್ರ (ಸಂಧಾನಿತ ಮೊತ್ತ)ದ ಮೂಲಕ ಭೂಸ್ವಾಧೀನ ಕಾಯ್ದೆ, 1894 ರಡಿ ನಿಗಧಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಪರಿಹಾರ ಮೊತ್ತವನ್ನು ನಿಗಧಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್. ನೀಡಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ನಅಇ 102 ಬೆಂಭೂಸ್ವಾ 2025

**(ಡಿ.ಕೆ ಶಿವಕುಮಾರ್)**
ಉಪ ಮುಖ್ಯಮಂತ್ರಿ